**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ಸಂಖ್ಯೆ : 01/2025**

**ಚಾ.ಸಾಃ 17, ಫ್ರಾ.ಸಾಃ 6**

| | |
|---|---|
| ಸಾಕ್ಷಿದಾರನ ಹೆಸರು | ತಿಮ್ಮಪ್ಪ ನಾಯ್ಕ |
| ತಂದೆಯ ಹೆಸರು | ವೆಂಕಪ್ಪ ನಾಯ್ಕ |
| ವಯಸ್ಸು | 52 ವರ್ಷ |
| ಉದ್ಯೋಗ | ವೃತ್ತ ನಿರೀಕ್ಷಕರು, ಸೂಳ್ಯ ವೃತ್ತ |
| ವಾಸ್ತವ್ಯ | ಸೂಳ್ಯ |

**ಸಾಕ್ಷಿಯನ್ನು ದಿನಾಂಕಃ 07-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ದಿನಾಂಕ 26-06-2024 ರಿಂದ 15-09-2024 ರವರೆಗೆ ನಾನು ಹೊನ್ನಾವರ ವೃತ್ತದ ಪ್ರಭಾರ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 01-07-2024 ರಂದು ಕೇಸಿನ ಕಡತವನ್ನು ಚಾಸಾ-16 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ ಚಾ.ಸಾ. 15 ರವರು ಮೃತನ ಶವ ಪಂಚನಾಮೆಯ ವರದಿಯನ್ನು ಹಾಜರುಪಡಿಸಿದ್ದು, ಅದನ್ನು ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-11 ಎಂದು ಗುರುತಿಸಲಾಯಿತು.

ಅದೇ ದಿನ ಬಸ್ಸ ಮಾಲೀಕ ಚಾ.ಸಾ. 9 ರವರಿಗೆ ಕಲಂ 133 ರಡಿಯಲ್ಲಿ ನೋಟೀಸ್ ಜಾರಿ ಮಾಡಿ ಆತನಿಂದ ಉತ್ತರವನ್ನು ಪಡೆದುಕೊಂಡಿರುತ್ತೇನೆ. ಈಗ ಅವುಗಳನ್ನು ನೋಡುತ್ತಿದ್ದು ನಿಪಿ-12 ಮತ್ತು 13 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 12 (ಎ) ಮತ್ತು 13(ಎ) ಎಂದು ಗುರುತಿಸಲಾಯಿತು.

ಚಾ.ಸಾ. 13 ರವರು ಹಾಜರುಪಡಿಸಿದ ವಾಹನಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಸದರಿ ಬಸ್ಸನ್ನು ಆತನ ಮಧ್ಯಂತರ ಸ್ವಾಧೀನಕ್ಕೆ ನೀಡಿರುತ್ತೇನೆ. ಆದೇ ದಿನ ಆರೋಪಿ ಠಾಣೆಗೆ ಹಾಜರಾಗಿದ್ದರಿಂದ ಆತನನನ್ನು ಬಂಧಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ತನಿಖೆಯ ಕಾಲಕ್ಕೆ ಪೊಟೋ ತೆಗೆದ ಬಗ್ಗೆ ಚಾ.ಸಾ. 13 ರವರಿಂದ ಕಲಂ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-14 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 14(ಎ) ಎಂದು ಗುರುತಿಸಲಾಯಿತು.

ದಿನಾಂಕಃ 10-07-2024 ರಂದು ಮೃತನ ಪಿ ಎಂ ವರದಿಯನ್ನು ಪಡೆದಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-15 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 15(ಎ) ಎಂದು ಗುರುತಿಸಲಾಯಿತು.

ದಿಃ 09-09-2024 ರಂದು ಅಪಘಾತಕ್ಕೊಳಗಾಗಿದ್ದ ಓಮನಿ ವಾಹನದ ಮಾಲೀಕರಾದ ಚಾ.ಸಾ. 8 ರವರಿಗೆ ಕಲಂ 133 ರಡಿಯಲ್ಲಿ ನೋಟೀಸ್ ನೀಡಿ ಉತ್ತರವನ್ನು ಪಡೆದಿರುತ್ತೇನೆ. ಈಗ

ಅವುಗಳನ್ನು ನೋಡುತ್ತಿದ್ದು, ನಿ.ಪಿ. 16 ಮತ್ತು 17 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 16(ಎ) ಮತ್ತು 17(ಎ) ಎಂದು ಗುರುತಿಸಲಾಯಿತು.

ಚಾ.ಸಾ. 8 ರವರು ಹಾಜರುಪಡಿಸಿದ ವಾಹನಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಸದರಿ ಬಸ್ಸನ್ನು ಆತನ ಮಧ್ಯಂತರ ಸ್ವಾಧೀನಕ್ಕೆ ನೀಡಿರುತ್ತೇನೆ.

ದಿಃ 15-09-2024 ರಂದು ಐ ಎಂ ವಿ ವರದಿಯನ್ನು ಪಡೆದಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-18 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 18(ಎ) ಎಂದು ಗುರುತಿಸಲಾಯಿತು. ಅದೇ ದಿನ ಗಾಯಾಳುಗಳ ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-19 ಎಂದು, ಸಾಕ್ಷಿ ಸಹಿಯನ್ನು ನಿ.ಪಿ. 19(ಎ) ಎಂದು ಗುರುತಿಸಲಾಯಿತು.

ತನಿಖೆ ಪೂರೈಸಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಮ್.ಎಲ್.ಎನ್. ರವರಿಂದಃ**

ಅಪಘಾತದ ಆದ ಸ್ಥಿತಿಯಲ್ಲಿ ತೆಗೆದಿರಬಹುದಾದ ಫೋಟೋಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಆರೋಪಿಯ ವಿರುದ್ಧ ಯಾವುದೇ ಆಪಾದನೆ ಕಂಡುಬರದೇ ಇದ್ದರು ಸಹ ಆತನ ವಿರುದ್ಧ ದೊಷಾರೋಪಣಾ ಪಟ್ಟಿ ಸಲ್ಲಿಸುವ ಕಾರಣಕ್ಕೆ ದಾಖಲಾತಿಗಳನ್ನು ತಯಾರಿಸಿ ಅವುಗಳ ಆಧಾರದಲ್ಲಿ ಆರೋಪಿಯ ವಿರುದ್ಧ ಸುಳ್ಳು ದೋಷಾರೊಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ-ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**